(ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮಕ್ಕೆ ಸಂಬಂಧಿಸಿದಂತೆ)

**ಕನ್ನಡ ಭಾಷಾಜ್ಞಾನ:** ಎಸ್.ಎಸ್.ಎಲ್.ಸಿ ಅಥವಾ ತತ್ಸಮಾನ ವಿದ್ಯಾರ್ಹತೆಯಲ್ಲಿ ಕನ್ನಡ ಭಾಷೆಯನ್ನು ಪ್ರಥಮ ಅಥವಾ ದ್ವಿತೀಯ ಭಾಷೆಯನ್ನಾಗಿ ವ್ಯಾಸಂಗ ಮಾಡಿದ್ದಲ್ಲಿ ಮಾತ್ರ ಅಭ್ಯರ್ಥಿಗಳು ನೇಮಕಾತಿಗೆ ಅರ್ಹರಾಗುತ್ತಾರೆ. ಇಲ್ಲವಾದಲ್ಲಿ ಜಾರಿಯಲ್ಲಿರುವ ನಿಯಮಾವಳಿಯಂತೆ ಸಂಸ್ಥೆಯು ನಡೆಸುವ ಕನ್ನಡ ಭಾಷಾ ಪರೀಕ್ಷೆಯಲ್ಲಿ ಒಂದೇ ಅವಕಾಶದಲ್ಲಿ ಉತ್ತೀರ್ಣರಾಗಬೇಕು. ಇಲ್ಲದಿದ್ದಲ್ಲಿ ಅವರ ಆಯ್ಕೆಯನ್ನು ರದ್ದುಗೊಳಿಸಲಾಗುವುದು.

**ix. ಪ್ರಶ್ನೆ ಪ್ರತಿಕೆ ಹಾಗೂ ಪಠ್ಯಕ್ರಮ :-**

- 1. ಜೂನಿಯರ್ ಪ್ರೋಗ್ರಾಮರ್ (ಗ್ರೂಪ್–ಬಿ)

| ಪತ್ರಿಕೆ/ Paper | ವಿಷಯ / Subject | ಅಂಕಗಳು/ Marks | ಅವಧಿ / Duration (ಗಂಟೆ / hours) |
|---|---|---|---|
| ಪತ್ರಿಕೆ–1 | ಸಾಮಾನ್ಯ ಪತ್ರಿಕೆ:–ಪ್ರಚಲಿತ ವಿದ್ಯಮಾನಗಳು, ಸಾಮಾನ್ಯ ವಿಜ್ಞಾನ, ಕರ್ನಾಟಕ ಇತಿಹಾಸ ಮತ್ತು ಭೂಗೋಳಶಾಸ್ತ್ರ, ಭಾರತದ ಇತಿಹಾಸ ಮತ್ತು ಭೂಗೋಳಶಾಸ್ತ್ರ, ಸಮಾಜ ವಿಜ್ಞಾನ, ಸಾಮಾನ್ಯ ಬೌದ್ಧಿಕ ಸಾಮರ್ಥ್ಯ, ಭಾರತದ ಸಂವಿಧಾನ, ಸಾರ್ವಜನಿಕ ಆಡಳಿತ ಮತ್ತು ಗ್ರಾಮೀಣಾಭಿವೃದ್ಧಿ, ವಿಜ್ಞಾನ ಮತ್ತು ತಂತ್ರಜ್ಞಾನ, ಭಾರತದ ಅರ್ಥವ್ಯವಸ್ಥೆ, ಅಂತರಾಷ್ಟ್ರೀಯ ಸಂಬಂಧಗಳು, ಪರಿಸರ ವಿಜ್ಞಾನ, ತಾರ್ಕಿಕ ಆಲೋಚನೆ, ದೈನಂದಿನ ಗ್ರಹಿಕೆಯ ವಿಷಯಗಳನ್ನು ಮತ್ತು ನಿಗದಿಪಡಿಸಲಾದ ಅರ್ಹತಾ ಪರೀಕ್ಷೆಯಲ್ಲಿನ ಪ್ರಾಯೋಗಿಕ ಜ್ಞಾನ. | 300 | 2 ಗಂಟೆ |
| ಪತ್ರಿಕೆ–2 | ನಿರ್ದಿಷ್ಟ ಪತ್ರಿಕೆ | 300 | 2 ಗಂಟೆ |

**1. ಪ್ರಥಮ ದರ್ಜೆ ಸಹಾಯಕರು (ಪ್ರಥಮ ದರ್ಜೆ ಕೋರ್ಟ್ ಕ್ಲರ್ಕ್ / ರೆವಿನ್ಯೂ ಇನ್ಸ್‌ಪೆಕ್ಟರ್), 2. ಸಹಾಯಕ / ಸಹಾಯಕ ಗ್ರಂಥಪಾಲಕ ಮತ್ತು 3. ಸಹಾಯಕ ಲೆಕ್ಕಿಗ 4. ಕಿರಿಯ ಅಧಿಕಾರಿ ಹುದ್ದೆಗಳಿಗೆ ಮತ್ತು 5. ಮಾರಾಟ ಪ್ರತಿನಿಧಿ.**

| ಪತ್ರಿಕೆ/ Paper | ವಿಷಯ / Subject | ಅಂಕಗಳು/ Marks | ಅವಧಿ / Duration (ಗಂಟೆ / hours) |
|---|---|---|---|
| ಪತ್ರಿಕೆ–1 | (ಎ) ಪ್ರಚಲಿತ ಘಟನೆಗಳಿಗೆ ಸಂಬಂಧಿಸಿದ ವಿಷಯಗಳ ಸಾಮಾನ್ಯ ಜ್ಞಾನ (ಬಿ) ಸಾಮಾನ್ಯ ವಿಜ್ಞಾನ ವಿಷಯಗಳು. (ಸಿ) ಭೂಗೋಳ ಶಾಸ್ತ್ರ ವಿಷಯಗಳು. (ಡಿ) ಸಮಾಜ ವಿಜ್ಞಾನ ವಿಷಯಗಳು. (ಇ) ಭಾರತೀಯ ಸಮಾಜ ಮತ್ತು ಅದರ ಬೆಳವಣಿಗೆಗಳ ಇತಿಹಾಸದ ವಿಷಯಗಳು. (ಎಫ್) ಭಾರತದ ಮತ್ತು ಕರ್ನಾಟಕ ಇತಿಹಾಸ. (ಜಿ) ಭಾರತದ ಸಂವಿಧಾನದ ಮತ್ತು ಸಾರ್ವಜನಿಕ ಆಡಳಿತ. (ಎಚ್) ಪ್ರಾಯೋಗಿಕ ಜ್ಞಾನ ಮತ್ತು ಬೌದ್ಧಿಕ ಸಾಮರ್ಥ್ಯದ ವಿಷಯಗಳು (ಎಸ್.ಎಸ್.ಎಲ್.ಸಿ ಮಟ್ಟದ) (ಐ) ಕರ್ನಾಟಕದ ಸಮಾಜಿಕ ಮತ್ತು ಸಾಂಸ್ಕೃತಿಕ ಇತಿಹಾಸದ ವಿಷಯಗಳು. (ಜೆ) ಸ್ವಾತಂತ್ರ್ಯಾ ನಂತರದಲ್ಲಿ ಕರ್ನಾಟಕದ ಭೂ ಸುಧಾರಣೆಗಳು ಮತ್ತು ಸಾಮಾಜಿಕ ಬದಲಾವಣೆಗಳ ವಿಷಯಗಳು. (ಕೆ) ಕರ್ನಾಟಕದ ಅರ್ಥವ್ಯವಸ್ಥೆ: ಅದರ ಸಾಮರ್ಥ್ಯ ಮತ್ತು ದೌರ್ಬಲ್ಯತೆ: ಪ್ರಸ್ತುತ ಸ್ಥಿತಿಗತಿ ಕುರಿತ ವಿಷಯಗಳು. (ಎಲ್) ಗ್ರಾಮೀಣಾಭಿವೃದ್ಧಿ, ಪಂಚಾಯತ್ ರಾಜ್ ಸಂಸ್ಥೆಗಳ ಮತ್ತು ಗ್ರಾಮೀಣ ಸಹಕಾರ ಸಂಸ್ಥೆಗಳ ವಿಷಯಗಳು. (ಎಂ) ಕರ್ನಾಟಕ ಪರಿಣಾಮಕಾರಿ ಆಡಳಿತಕ್ಕಾಗಿ ವಿಜ್ಞಾನ ಮತ್ತು ತಂತ್ರಜ್ಞಾನದ ಪಾತ್ರ ಕುರಿತ ವಿಷಯಗಳು. (ಎನ್) ಕರ್ನಾಟಕದ ಪರಿಸರ ಸಂಬಂಧಿ ಸಮಸ್ಯೆಗಳು ಮತ್ತು ಅಭಿವೃದ್ಧಿ ಕುರಿತ ವಿಷಯಗಳು (ಓ) ಬೌದ್ಧಿಕ ಸಾಮರ್ಥ್ಯದ ವಿಷಯಗಳು. | 100 | 2 ಗಂಟೆ |
| ಪತ್ರಿಕೆ–2 | (ಎ) ಸಾಮಾನ್ಯ ಕನ್ನಡ (ಬಿ) ಸಾಮಾನ್ಯ ಇಂಗ್ಲೀಷ್ (ಸಿ) ಕಂಪ್ಯೂಟರ್ ಜ್ಞಾನ | 100 | 2 ಗಂಟೆ |
| ಕಿರಿಯ ಅಧಿಕಾರಿ & ಮಾರಾಟ ಪ್ರತಿನಿಧಿ (ಮಾರುಕಟ್ಟೆ) ಪತ್ರಿಕೆ–2 | **(Specific Paper)**<br>1. Marketing: creating customer Value and Engagement<br>2. Consumer Markets and Buyer | 100 | 2 ಗಂಟೆ |

1. ದ್ವಿತೀಯ ದರ್ಜೆ ಸಹಾಯಕರು, 2. ಕಿರಿಯ ಸಹಾಯಕ 3. ಅಪರೇಟರ್ (ಸೆಮಿ ಸ್ಕಿಲ್ಡ್) ಮತ್ತು 4. ನಿರ್ವಾಹಕ ಹುದ್ದೆಗಳಿಗೆ:

| ಪತ್ರಿಕೆ/ Paper | ವಿಷಯ / Subject | ಅಂಕಗಳು/ Marks | ಅವಧಿ / Duration (ಗಂಟೆ / hours) |
|---|---|---|---|
| ಪತ್ರಿಕೆ–1 | (ಎ) ಪ್ರಚಲಿತ ಘಟನೆಗಳಿಗೆ ಸಂಬಂಧಿಸಿದ ಸಾಮಾನ್ಯ ಜ್ಞಾನದ ವಿಷಯಗಳು. (ಬಿ) ದೈನಂದಿನ ಗ್ರಹಿಕೆಯ ವಿಷಯಗಳು (ಸಿ) ಭಾರತದ ಸಂವಿಧಾನದ ಸ್ಥೂಲ ನೋಟದ ವಿಷಯಗಳು. (ಡಿ) ವಿಶೇಷವಾಗಿ ಕರ್ನಾಟಕ್ಕೆ ಸಂಬಂಧಿಸಿದ ಭಾರತದ ಇತಿಹಾಸ. (ಇ) ಕರ್ನಾಟಕಕ್ಕೆ ಸಂಬಂಧಿಸಿದಂತೆ ಭಾರತದ ಭೂಗೋಳ ವಿಷಯಗಳು. (ಎಫ್) ರಾಜ್ಯ ಮತ್ತು ಪ್ರಾದೇಶಿಕ ಆಡಳಿತ ಕುರಿತ ವಿಷಯಗಳು. (ಜಿ) ಗ್ರಾಮೀಣಾಭಿವೃದ್ಧಿ ಪಂಚಾಯತ್‌ರಾಜ್ ಸಂಸ್ಥೆಗಳು ಮತ್ತು ಗ್ರಾಮೀಣ ಸಹಕಾರ ಸಂಸ್ಥೆಗಳಿಗೆ ಸಂಬಂಧಿಸಿದ ಉಪಕ್ರಮಗಳನ್ನು ಒಳಗೊಂಡಂತೆ ಕರ್ನಾಟಕ ಆರ್ಥಿಕತೆಯ ಅಭಿವೃದ್ಧಿ ಕುರಿತ ವಿಷಯಗಳು. (ಎಚ್) ಕರ್ನಾಟಕದ ಪರಿಸರ ಸಂಬಂಧಿ ಸಮಸ್ಯೆಗಳು ಮತ್ತು ಅಭಿವೃದ್ಧಿ ಕುರಿತ ವಿಷಯಗಳು | 100 | 2 ಗಂಟೆ |
| ಪತ್ರಿಕೆ–2 | (ಎ) ಸಾಮಾನ್ಯ ಕನ್ನಡ (ಬಿ) ಸಾಮಾನ್ಯ ಇಂಗ್ಲೀಷ್ (ಸಿ) ಕಂಪ್ಯೂಟರ್ ಜ್ಞಾನ | 100 | 2 ಗಂಟೆ |

- ಸ್ಪರ್ಧಾತ್ಮಕ ಪರೀಕ್ಷೆಗೆ ವಿವರವಾದ ವೇಳಾ ಪಟ್ಟಿಯನ್ನು ಪ್ರಾಧಿಕಾರದ ವೆಬ್‌ಸೈಟ್‌ನಲ್ಲಿ ನಂತರ ಪ್ರಕಟಿಸಲಾಗುವುದು. ಅಭ್ಯರ್ಥಿಯು ಅರ್ಹತೆಗಾಗಿ ಸ್ಪರ್ಧಾತ್ಮಕ ಪರೀಕ್ಷೆಯಲ್ಲಿನ ಒಟ್ಟು ಅಂಕಗಳಲ್ಲಿ ಕನಿಷ್ಠ ಶೇಕಡ **35** ರಷ್ಟು ಅಂಕಗಳನ್ನು ಗಳಿಸುವುದು ಕಡ್ಡಾಯವಾಗಿರುತ್ತದೆ. *(ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮಗಳಲ್ಲಿನ ಹುದ್ದೆಗಳಿಗೆ ಸ್ಪರ್ಧಾತ್ಮಕ ಪರೀಕ್ಷೆಯಲ್ಲಿನ ಒಟ್ಟು ಅಂಕಗಳಲ್ಲಿ ಕನಿಷ್ಠ ಶೇಕಡ **30** ರಷ್ಟು ಅಂಕಗಳನ್ನು ಗಳಿಸುವುದು ಕಡ್ಡಾಯವಾಗಿರುತ್ತದೆ).* ಕನಿಷ್ಠ ಅಂಕಗಳನ್ನು ಗಳಿಸದ ಅಭ್ಯರ್ಥಿಗಳು ಆಯ್ಕೆ ಪ್ರಕ್ರಿಯೆಗೆ ಅನರ್ಹರಾಗುತ್ತಾರೆ.

**3 ಋಣಾತ್ಮಕ ಮೌಲ್ಯಮಾಪನ (Negative Valuation):–**

ಸ್ಪರ್ಧಾತ್ಮಕ ಪರೀಕ್ಷೆ ಪ್ರಶ್ನೆಪತ್ರಿಕೆಗಳಲ್ಲಿನ ಪ್ರತಿಯೊಂದು ಪ್ರಶ್ನೆಗೂ 04 ಪರ್ಯಾಯ ಉತ್ತರಗಳಿದ್ದು, ಅಭ್ಯರ್ಥಿಯು ಯಾವುದಾದರೂ ಒಂದು ಸರಿ ಉತ್ತರವನ್ನು ಮಾತ್ರ ಆಯ್ಕೆ ಮಾಡತಕ್ಕದ್ದು. ಪ್ರತಿ ತಪ್ಪು ಉತ್ತರಕ್ಕೆ ನಾಲ್ಕನೇ ಒಂದಂಶ ದಷ್ಟು (¼) ಅಂಕಗಳನ್ನು ಕಳೆಯಲಾಗುವುದು.

- ಒ.ಎಂ.ಆರ್ ಉತ್ತರ ಪತ್ರಿಕೆಯಲ್ಲಿ 5ನೇ ಆಯ್ಕೆ/ ವೃತ್ತವನ್ನು ನೀಡಿದ್ದು, ಉತ್ತರಿಸದೇ ಇರುವ ಪ್ರಶ್ನೆಗಳಿಗೆ ಐದನೇ ಆಯ್ಕೆ/ವೃತ್ತ 5 ಅನ್ನು ಶೇಡ್ ಮಾಡಲು ಕೊನೆಯ ಬೆಲ್ ಆದ ನಂತರ ಹೆಚ್ಚುವರಿಯಾಗಿ ಐದು ನಿಮಿಷಗಳನ್ನು ನೀಡಲಾಗುವುದು. ಯಾವುದೇ ಆಯ್ಕೆಯನ್ನು / ವೃತ್ತವನ್ನು ಶೇಡ್ ಮಾಡಿಲ್ಲದಿದ್ದರೆ, ಪ್ರತಿ ಪ್ರಶ್ನೆಗೆ 1/4 ಅಂಕಗಳನ್ನು ಕಡಿತ ಗೊಳಿಸಲಾಗುತ್ತದೆ.

**4 ಆಯ್ಕೆ ವಿಧಾನ : ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದಲ್ಲಿನ ನಿರ್ವಾಹಕ ಹುದ್ದೆಗಳಿಗೆ :**

- ನೇರ ನೇಮಕಾತಿ ಹುದ್ದೆಗಳಿಗೆ ಓ.ಎಂ.ಆರ್. ಮೂಲಕ ಸಾಮಾನ್ಯ ಸಾಮರ್ಥ್ಯ ಪರೀಕ್ಷೆ ನಡೆಸಲಾಗುವುದು, ನಿರ್ವಾಹಕ ಹುದ್ದೆಗೆ ಅರ್ಜಿ ಸಲ್ಲಿಸಿದ ಅಭ್ಯರ್ಥಿಗಳು ಈ ಸಾಮಾನ್ಯ ಸಾಮರ್ಥ್ಯ ಪರೀಕ್ಷೆಯಲ್ಲಿ ಪಡೆದಿರುವ ಅಂಕಗಳ ಶೇಕಡ 75 ರಷ್ಟನ್ನು ಹಾಗೂ ಹುದ್ದೆಗೆ ನಿಗದಿಪಡಿಸಿರುವ ವಿದ್ಯಾರ್ಹತೆಯಲ್ಲಿ ಅವರು ಪಡೆದ ಅಂಕಗಳ ಶೇಕಡ 25 ರಷ್ಟನ್ನು ಒಗ್ಗೂಡಿಸಿ, ಸದರಿ ಒಟ್ಟು ಶೇಕಡಾವಾರು ಅಂಕಗಳ ಅರ್ಹತೆ ಮತ್ತು ಮೀಸಲಾತಿ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು.
- ಮೇಲ್ಕಂಡಂತೆ ಅರ್ಹತೆ ಹಾಗೂ ನೀತಿಯನುಸಾರ ಆಯ್ಕೆ ಪ್ರಾಧಿಕಾರ ನಿಗದಿಪಡಿಸುವ ಅನುಪಾತದಲ್ಲಿ ಅಭ್ಯರ್ಥಿಗಳನ್ನು ಮೂಲ ದಾಖಲಾತಿಗಳು / ದೈಹಿಕ ದಾರ್ಢ್ಯತೆ ಪರಿಶೀಲನೆಗಾಗಿ ಆಹ್ವಾನಿಸಲಾಗುವುದು.

**5 ಅರ್ಹತಾ ಷರತ್ತುಗಳು–**

(ಅ) ಭಾರತೀಯ ನಾಗರೀಕನಾಗಿರತಕ್ಕದ್ದು.

(ಆ) ಒಬ್ಬ ಜೀವಂತ ಪತ್ನಿಗಿಂತ ಹೆಚ್ಚು ಮಂದಿ ಪತ್ನಿಯರನ್ನು ಹೊಂದಿರುವ ಪುರುಷ ಅಭ್ಯರ್ಥಿ ಮತ್ತು ಈಗಾಗಲೇ ಇನ್ನೊಬ್ಬ ಹೆಂಡತಿ ಇರುವ ವ್ಯಕ್ತಿಯನ್ನು ಮದುವೆಯಾಗಿರುವ ಮಹಿಳಾ ಅಭ್ಯರ್ಥಿಯು ಸರ್ಕಾರದಿಂದ ಪೂರ್ವಾನುಮತಿಯನ್ನು ಪಡೆಯದೇ ನೇಮಕಾತಿಗೆ ಅರ್ಹರಾಗುವುದಿಲ್ಲ.